ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	736
ಮಾನ್ಯ ಸದಸ್ಯರ ಹೆಸರು	:	ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ	:	20.12.2021
ಉತ್ತರಿಸುವ ಸಚಿವರು	:	ಉನ್ನತ ಶಿಕ್ಷಣ, ಐಟಿ–ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಅಧೀನದಲ್ಲಿರುವ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ತಾಂತ್ರಿಕ ಕಾಲೇಜುಗಳಲ್ಲಿ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳು ವಿನಾಯಕ ಮಿಷನ್ ಯುನಿವರ್ಸಿಟಿ ಹಾಗೂ ಇನ್ನೂ ಕೆಲವು ಯುನಿವರ್ಸಿಟಿಗಳಲ್ಲಿ ಪಡೆದಿರುವ ಪಿ.ಹೆಚ್.ಡಿ ಪದವಿಯನ್ನು ಮಾನ್ಯ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿಯು ವಿದ್ಯಾರ್ಹತೆಯನ್ನು ಪ್ರಶ್ನಿಸಿ ಸಿಬ್ಬಂದಿಗಳನ್ನು ಗೊಂದಲಕ್ಕೀಡು ಮಾಡುವಂತೆ ಯಾವುದೇ ಸುತ್ತೋಲೆಗಳನ್ನು ಹೊರಡಿಸಿರುವುದಿಲ್ಲ ಹಾಗೂ ವಿನಾಯಕ ಮಿಷನ್ ಯುನಿವರ್ಸಿಟಿ ಸೇರಿ ಯು.ಜಿ.ಸಿ ಮಾನ್ಯತೆ ಹೊಂದಿರುವ ಎಲ್ಲ ವಿಶ್ವವಿದ್ಯಾಲಯಗಳಿಂದ ಅಭ್ಯರ್ಥಿಗಳು ಯು.ಜಿ.ಸಿ ನಿಯಮಾವಳಿಗಳ ಪ್ರಕಾರ ಪಡೆದಿರುವ ಪಿ.ಹೆಚ್.ಡಿ. ಪದವಿಗಳಿಗೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಿಂದ ಮಾನ್ಯತೆ ಇರುತ್ತದೆ.
ಆ)	ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರಗಳನ್ನು ಒದಗಿಸುವುದು)	

ಇಡಿ 257 ಟಿಇಸಿ 2021

(ಡಾ॥ ಅಶ್ವಥ್ ನಾರಾಯಣ.ಸಿ.ಎನ್)

ಉನ್ನತ ಶಿಕ್ಷಣ, ಐಟಿ–ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು